# 6,648 ಶಾಲೆಗಳ ಮರು ನಿರ್ಮಾಣಕ್ಕೆ 758 ಕೋಟಿ ಬಿಡುಗಡೆ



ರಾಜ್ಯದಲ್ಲಿ ಪ್ರವಾಹದಿಂದ ಹಾನಿಗೊಳಗಾಗಿರುವ 6,648 ಶಾಲೆಗಳ ಮರು ನಿರ್ಮಾಣಕ್ಕೆ 758 ಕೋಟಿ ಬಿಡುಗಡೆ ಮಾಡಿರುವುದಾಗಿ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವ ಸುರೇಶ್ ಕುಮಾರ್ ತಿಳಿಸಿದರು.

ವಿಧಾನಸಭೆಯಲ್ಲಿ ಮಾತನಾಡಿ, ರಾಜ್ಯದಲ್ಲಿ 7,770 ಕೊಠಡಿಗಳ ದುರಸ್ತಿಗೆ 199.50 ಕೋಟಿ ರು.ಗಳ ಬಿಡುಗಡೆ ಮಾಡಲಾಗಿದೆ ಎಂದರು: ಇನ್ನಷ್ಟು ಶಾಲೆಗಳ ಪುನರ್ ನಿರ್ಮಾಣಕ್ಕೆ 750 ಕೋಟಿ ನೀಡಲಾಗಿದೆ. ಈಗಾಗಲೇ ಶಾಲೆಗಳ ಪುನರ್ ನಿರ್ಮಾಣ ಕಾರ್ಯವು ಆರಂಭವಾಗಿದೆ ಎಂದರು.

ಪ್ರವಾಹ ಸಂಭವಿಸಿ 6 ತಿಂಗಳು ಕಳೆದಿದೆ. ಮಕ್ಕಳು ಅಂಗವಾಡಿ, ಮರದ ಕೆಳಗೆ, ದೇಗುಲಗಳ ಬಳಿ ಪಾಠ ಕೇಳುತ್ತಿದ್ದಾರೆ. ಹೀಗಾದರೆ ಗುಣಮಟ್ಟದ ಶಿಕ್ಷಣ ಹೇಗೆ ಎಂದು ಸಿದ್ದರಾಮಯ್ಯ ಪ್ರಶ್ನಿಸಿದರು. ಈ ವೇಳೆ ಮಧ್ಯ ಪ್ರವೇಶಿಸಿದ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ಇಂತಹ ಪರಿಸ್ಥಿತಿಯಲ್ಲಿ ನೀವಿದ್ದರೆ ಏನು ಮಾಡುತ್ತಿದ್ದಿರಿ ಎಂದು ಕೇಳಿದರು. ಆದ್ಯತೆ ಮೇರೆ ತಕ್ಷಣ ಪತ್ರ ಪೂರೈಸುತ್ತಿದ್ದೆವು ಎಂದು ಸಿದ್ದರಾಮಯ್ಯ ಹೇಳಿದಾಗ, ನಾವೂ ಅದನ್ನೇ ಮಾಡಿದ್ದೇವೆ ಎಂದು ಸಿಎಂ ಉತ್ತರಿಸಿದರು. ತಾವು ಈ ನಿಟ್ಟಿನಲ್ಲಿ ಕೆಲಸ ಮಾಡಿಲ್ಲ ಎಂದು ಸಿದ್ದರಾಮಯ್ಯ ತಕರಾರು ತೆಗೆದಾಗ ಸುರೇಶ್‌ಕುಮಾರ್ ಮಾತನಾಡಿ, ಮಕ್ಕಳಿಗೆ 11 ಲಕ್ಷ ಪಠ್ಯ ಪುಸ್ತಕಗಳನ್ನು ಮುದ್ರಿಸಿ ತಕ್ಷಣ ಪೂರೈಸಿದ್ದೇವೆ. ಅದಕ್ಕೆ ಸಮಯಾವಕಾಶ ಹಿಡಿದಿದೆ ನಿಜ. ಆದರೆ ವಿದ್ಯಾರ್ಥಿಗಳಿಗೆ ತೊಂದರೆಯಾಗುವಂತಹ ವಿಳಂಬವಾಗಿಲ್ಲ ಎಂದರು.